| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣಗೌಡರು ಮಾತನಾಡುತ್ತಾ, ಶಾಲೆಗಳು ಮುಚ್ಚಿರುವ ಕಡೆಗಳಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನ ಮಾಡಲಾಗಿದೆ. ಅಂತಹ ಕಡೆಗಳಲ್ಲಿ ಬದಲಾವಣೆ ಮಾಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಶಾಲೆಗಳು ಮುಚ್ಚಿದ್ದಲ್ಲಿ ಅಂಗನವಾಡಿ ಕೇಂದ್ರಗಳಿಗೆ ಬದಲಾವಣೆ ಮಾಡಲು ಸೂಚನೆ ನೀಡುವುದಾಗಿ ಸಭೆಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿಗಳಲ್ಲಿ ಪ್ರತಿಯೊಂದು ಕಾಮಗಾರಿಗಳಲ್ಲಿಯೂ ಸಹ ಪೈಪ್‌ಗಳಿಗೆ ಗುಣಮಟ್ಟದ ದೃಡೀಕರಣಕ್ಕೆಂದು ರೂ.3000.00ಗಳನ್ನು ಕಟಾವಣೆ ಮಾಡುತ್ತಿದ್ದಾರೆ. ಇದರಿಂದ, ಗುತ್ತಿಗೆದಾರರು ಒಂದೇ ಕಂಪನಿಯ ಪೈಪ್‌ಗಳನ್ನು ಬಳಸಿದರೂ ಸಹ ಪ್ರತಿ ಕಾಮಗಾರಿಯಲ್ಲಿಯೂ ಸಹ ರೂ.3000.00ಗಳನ್ನು ನೀಡಬೇಕಾಗಿರುತ್ತದೆ. ಆದ್ದರಿಂದ ಐ.ಎಸ್.ಐ ಮಾರ್ಕನ್ನು ಹೊಂದಿರುವಂತಹ ಪೈಪ್‌ಗಳನ್ನು ಗುತ್ತಿಗೆದಾರರು ಬಳಸಿದಲ್ಲಿ ಗುಣಮಟ್ಟದ ದೃಡೀಕರಣಕ್ಕೆ ಹಣವನ್ನು ಕಟಾವಣೆ ಮಾಡದಿರುವಂತೆ ನಿರ್ದೇಶನ ನೀಡಬೇಕೆಂದು ತಿಳಿಸಿದರು.<br>ಇದಕ್ಕೆ ಮಾನ್ಯ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರು, ಮಾನ್ಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರು ಮತ್ತು ಮಾನ್ಯ ಸದಸ್ಯರುಗಳು ತಮ್ಮ ಸಹಮತವನ್ನು ವ್ಯಕ್ತಪಡಿಸಿದರು.<br>ಮಾನ್ಯ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ರಾಯಲ್ಟಿ ಕಟಾವಣೆ ಮಾಡುತ್ತಾರೆ. ಇದರಿಂದ ಕಡಿಮೆ ಮೊತ್ತದಲ್ಲಿ ಅನುಷ್ಠಾನ ಮಾಡುವ ಕಾಮಗಾರಿಗಳಿಗೆ ಗುತ್ತಿಗೆದಾರರು ರಾಯಲ್ಟಿಯನ್ನು ವಾಪಸ್ಸು ಪಡೆಯಲು ಸಾಧ್ಯವಾಗುವುದಿಲ್ಲ. ಈ ಬಗ್ಗೆಯೂ ಸಹ ಸೂಕ್ತ ನಿರ್ದೇಶನ **ನೀಡಬೇಕೆಂದು ಕೋರಿದರು.**<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಐ.ಎಸ್.ಐ. ಮಾರ್ಕನ್ನು ಹೊಂದಿರುವಂತಹ ಫಿನೋಲೆಕ್ಸ್ ಪೈಪ್‌ಗಳನ್ನೇ ಹಾಕಿದಲ್ಲಿ ಗುಣಮಟ್ಟ ಪರೀಕ್ಷೆಗೆಂದು ಹಣವನ್ನು ಕಟಾವಣೆ ಮಾಡುವುದು ಸಮಂಜಸವಾಗಿರುವುದಿಲ್ಲ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸುವುದಾಗಿ ತಿಳಿಸಿದರು.<br>ಮುಂದಿನ ಸಾಮಾನ್ಯ ಸಭೆಯನ್ನು ದಿನಾಂಕ: 28-01-2013ರಂದು ನಡೆಸಲು ತೀರ್ಮಾನಿಸಲಾಯಿತು. | |
| | | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ವಂದನಾರ್ಪಣೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಡಿ.ಜಿ.ಅಂಬಿಕ ರಾಮಣ್ಣ)
**ಅಧ್ಯಕ್ಷರು**
**ಜಿಲ್ಲಾ ಪಂಚಾಯತಿ, ಹಾಸನ.**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಪ್ರತಿ ಕೊಳವೆ ಬಾವಿಗೆ ರೂ.1.00ಲಕ್ಷದಂತೆ ಅನುದಾನವನ್ನು ನಿಗದಿಪಡಿಸಲು ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರುಗಳಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಮಾತನಾಡುತ್ತಾ, ಮಟ್ಟನವಿಲೆ ಗ್ರಾಮದಲ್ಲಿಯೂ ಸಹ ನೀರಿನ ಸಮಸ್ಯೆ ತೀವ್ರವಾಗಿರುವುದಾಗಿ ಸಭೆಯ ಗಮನಕ್ಕೆ ತಂದರು.

ಮಾನ್ಯ ಸದಸ್ಯರಾದ ಶ್ರೀ ಎ.ಬಿ.ನಂಜುಂಡೇಗೌಡರು ಮಾತನಾಡುತ್ತಾ, ಒಂದು ತಿಂಗಳು ಕಳೆದ ನಂತರ ಶ್ರವಣಬೆಳಗೊಳ ಕ್ಷೇತ್ರದಲ್ಲಿಯೂ ಸಹ ಕುಡಿಯುವ ನೀರಿನ ಸಮಸ್ಯೆ ಉಂಟಾಗುತ್ತದೆ ಎಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಕೃಷ್ಣನಾಯಕ್‌ರವರು ಮಾತನಾಡುತ್ತಾ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತರದೇ ಕೊಳವೆ ಬಾವಿಗಳನ್ನು ಕೊರೆಯುತ್ತಿದ್ದಾರೆ. ಐ.ಎಂ.ಐ.ಎಸ್ ಅಡಿಯಲ್ಲಿ ಅಳವಡಿಸಿರುವ ಕಾಮಗಾರಿಗಳ ಬಗ್ಗೆಯೂ ಸಹ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತರುತ್ತಿಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡುವಾಗ, ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತರಬೇಕೆಂದು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅರಸೀಕೆರೆ ಇವರಿಗೆ ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಪುರುಷೋತ್ತಮರವರು ಮಾತನಾಡುತ್ತಾ, ಆಲೂರು ತಾಲ್ಲೂಕಿನಲ್ಲಿಯೂ ಸಹ ಕುಡಿಯುವ ನೀರಿನ ಸಮಸ್ಯೆ ಬಹಳವಾಗಿರುತ್ತದೆ. ಭೂವಿಜ್ಞಾನಿಗಳು ನೀರು ಬರುವ ಜಾಗವನ್ನು ಸಮರ್ಪಕವಾಗಿ ಗುರುತಿಸದೇ ಇರುವುದರಿಂದ, ಕೊಳವೆ ಬಾವಿಗಳನ್ನು ಕೊರೆದರೂ ಸಹ ನೀರು ಬರುತ್ತಿಲ್ಲ. ಆದ್ದರಿಂದ, ಸಮರ್ಪಕವಾಗಿ ನೀರು ಬರುವ ಜಾಗವನ್ನು ಗುರುತಿಸುವಂತೆ ಸೂಚಿಸಬೇಕೆಂದು ತಿಳಿಸಿದೆ.

ಮಾನ್ಯ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ಗ್ರಾಮೀಣ ಪ್ರದೇಶಗಳಲ್ಲಿ ಖಾಸಗಿಯವರಿಗೆ ಸೇರಿದ ಜಮೀನಿನಲ್ಲಿ ಕೊಳವೆ ಬಾವಿಗಳನ್ನು ಕೊರೆದಿದ್ದು, ಖಾಸಗಿಯವರು ಅಡ್ಡಿಪಡಿಸುತ್ತಾರೆಂದು ಸಭೆಯ ಗಮನಕ್ಕೆ ತಂದರು. ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಿದ್ದು, ಕೆರೆಗಳಲ್ಲಿ ಹೊಂಡಗಳನ್ನು ತೆಗೆಯಲು ಮತ್ತು ತೊಟ್ಟಿಗಳನ್ನು ನಿರ್ಮಾಣ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕೆರೆಗಳಲ್ಲಿ 10 ಅಡಿ ಆಳವುಳ್ಳ ಹೊಂಡವನ್ನು ತೆಗೆದಲ್ಲಿ ನೀರು ನಿಲ್ಲದೆ, ಕಾಮಗಾರಿಯು ವ್ಯರ್ಥವಾಗುತ್ತದೆ. ಅದರ ಬದಲಿಗೆ ಕುಡಿಯುವ ನೀರಿನ ಯೋಜನೆ ಪಕ್ಕದಲ್ಲಿ ನೀರಿನ ತೊಟ್ಟಿಗಳನ್ನು ನಿರ್ಮಿಸುವುದು ಸೂಕ್ತವೆಂದು ತಿಳಿಸಿದರು.

ಮಾನ್ಯ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರು ಮಾತನಾಡುತ್ತಾ, ಐ.ಎಂ.ಐ.ಎಸ್ ಅಡಿಯಲ್ಲಿ ಪೈಪ್‌ಲೈನ್ ವಿಸ್ತರಣೆ ಕಾಮಗಾರಿಗೆ ಅಗತ್ಯ ಇರಲಿ ಅಥವಾ ಇಲ್ಲದಿರಲಿ ರೂ.5.00ಲಕ್ಷಗಳವರೆಗೆ ಅಂದಾಜುಪಟ್ಟಿಯನ್ನು ಸಿದ್ಧಪಡಿಸಿರುತ್ತಾರೆ. ಆದರೆ, ವಾಸ್ತವವಾಗಿ ಅಷ್ಟು ಪೈಪ್‌ಲೈನ್ ಅವಶ್ಯತೆಯಿರುವುದಿಲ್ಲ. ಆದ್ದರಿಂದ, ಪೈಪ್‌ಲೈನ್ ಕಾಮಗಾರಿ ಎಷ್ಟು ಅವಶ್ಯಕತೆಯಿದೆ ಅಷ್ಟಕ್ಕೆ ಮಾತ್ರ ಅಂದಾಜುಪಟ್ಟಿಯನ್ನು ಸಿದ್ಧಪಡಿಸಲು ಕ್ರಮ ವಹಿಸಬೇಕೆಂದು ಕೋರಿದರು.

| | | | |
|---|---|---|---|
| ೩ | ಜಿಲ್ಲಾ ಪಂಚಾಯಿತಿ ಸದಸ್ಯರ ಅಧ್ಯಯನ ಪ್ರವಾಸಕ್ಕೆ ಅನುಮೋದನೆ ನೀಡುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಎಲ್ಲಾ ಜಿಲ್ಲಾ ಪಂಚಾಯಿತಿಗಳಲ್ಲಿ ಅಧ್ಯಕ್ಷರು/ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಅಧ್ಯಯನ ಪ್ರವಾಸ ಮಾಡಲು ಅವಕಾಶ ಮಾಡಲಾಗಿರುತ್ತದೆ. ಅದರಂತೆ, ಹಾಸನ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು/ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಬೇರೆ ರಾಜ್ಯಗಳಲ್ಲಿ ಅಧ್ಯಯನ ಪ್ರವಾಸ ಕೈಗೊಳ್ಳಲು ಮತ್ತು ಈ ಸಂಬಂಧ ತಗಲುವ ವೆಚ್ಚವನ್ನು ಜಿಲ್ಲಾ ಪಂಚಾಯಿತಿ ಅಧ್ಯಕ್ಷರ ಅನುದಾನದಲ್ಲಿ ಭರಿಸಲು ಸಭೆಯ ಅನುಮೋದನೆ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>2012–13ನೇ ಸಾಲಿನಲ್ಲಿ ಹಾಸನ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು /ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಬೇರೆ ರಾಜ್ಯಗಳಲ್ಲಿ ಅಧ್ಯಯನ ಪ್ರವಾಸ ಕೈಗೊಳ್ಳಲು ಮತ್ತು ಈ ಸಂಬಂಧ ತಗಲುವ ವೆಚ್ಚವನ್ನು ಜಿಲ್ಲಾ ಪಂಚಾಯಿತಿ ಅಧ್ಯಕ್ಷರ ಅನುದಾನದಲ್ಲಿ ಭರಿಸಲು ಅನುಮೋದನೆ ನೀಡಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |
| 4 | ಹಂಡ್ರಂಗಿ ಗ್ರಾಮದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ಹಳೆಯ ಅನುಪಯುಕ್ತ ಕಟ್ಟಡಗಳನ್ನು ಗ್ರಾಮ ಪಂಚಾಯಿತಿಗೆ ವಹಿಸಿಕೊಡುವ ಬಗ್ಗೆ. | ಮಾನ್ಯ ಸದಸ್ಯರಾದ ಶ್ರೀ.ವಿ.ಎ.ನಂಜುಂಡಸ್ವಮಿರವರು ಮಾತನಾಡುತ್ತಾ, ಹಂಡ್ರಂಗಿ ಗ್ರಾಮ ಪಂಚಾಯಿತಿ ಹಂಡ್ರಂಗಿ ಗ್ರಾಮದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ ಹಳೆಯ ಅನುಪಯುಕ್ತ ಶಾಲಾ ಕಟ್ಟಡಗಳನ್ನು ಗ್ರಾಮ ಪಂಚಾಯಿತಿಯ ಸಾರ್ವಜನಿಕ ಸೇವಾ ಚಟುವಟಿಕೆಗಳಿಗಾಗಿ ~~ಗ್ರಾಮ ಪಂಚಾಯಿತಿ ಸುಪರ್ದಿಗೆ ವಹಿಸಿಕೊಡುವ ಬಗ್ಗೆ ಹಂಡ್ರಂಗಿ ಗ್ರಾಮ~~ ಪಂಚಾಯಿತಿಯಲ್ಲಿ ನಿರ್ಣಯವನ್ನು ಮಾಡಿದ್ದು, ಜಿಲ್ಲಾ ಪಂಚಾಯಿತಿಗೆ ಪತ್ರವನ್ನೂ ಸಹ ಬರೆದಿರುತ್ತಾರೆ. ಅದ್ದರಿಂದ, ಗ್ರಾಮ ಪಂಚಾಯಿತಿ ನಿರ್ಣಯದಂತೆ, ಹಂಡ್ರಂಗಿ ಗ್ರಾಮದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ ಹಳೆಯ ಅನುಪಯುಕ್ತ ಶಾಲಾ ಕಟ್ಟಡಗಳನ್ನು ಗ್ರಾಮ ಪಂಚಾಯಿತಿಯ ಸಾರ್ವಜನಿಕ ಸೇವಾ ಚಟುವಟಿಕೆಗಳಿಗೆ ಬಿಟ್ಟುಕೊಡುವ ಬಗ್ಗೆ ಸಭೆಯ ಅನುಮೋದನೆ ನೀಡಬೇಕೆಂದು ಕೋರಿದರು. | ಸಭೆಯಲ್ಲಿ ನಿರ್ಣಯಿಸಿದಂತೆ, ಹಂಡ್ರಂಗಿ ಗ್ರಾಮ ಪಂಚಾಯಿತಿ ಹಂಡ್ರಂಗಿ ಗ್ರಾಮದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ ಹಳೆಯ ಅನುಪಯುಕ್ತ ಶಾಲಾ ಕಟ್ಟಡಗಳನ್ನು ಗ್ರಾಮ ಪಂಚಾಯಿತಿಯ ಸಾರ್ವಜನಿಕಸೇವಾ ಚಟುವಟಿಕೆ ಗಳಿಗಾಗಿ ಗ್ರಾಮ ಪಂಚಾಯಿತಿ ಸುಪರ್ದಿಗೆ ಬಿಟ್ಟು ಕೊಡಲು ಸಭೆಯಲ್ಲಿ ಸರ್ವಾನುಮತದಿಂದ ಅನುಮೋದನೆ ನೀಡಲಾಯಿತು. |
| 5 | ಬರಪರಿಹಾರದಡಿ ಕುಡಿಯುವ ನೀರಿನ ಸಮಸ್ಯೆ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲೆಯಲ್ಲಿ ಬರ ಇರುವುದರಿಂದ, ಕುಡಿಯುವ ನೀರಿನ ಸಮಸ್ಯೆ ಬಹಳವಾಗಿದ್ದು, ಸರ್ಕಾರಕ್ಕೆ ರೂ.31.00ಕೋಟಿಗಳ ಅನುದಾನಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು, ಅದರಲ್ಲಿ ರೂ.28.00ಕೋಟಿಗಳಿಗೆ ಅನುಮೋದನೆ ದೊರೆಯುವ ನಿರೀಕ್ಷೆ ಇದೆ ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣಗೌಡರವರು ಮಾತನಾಡುತ್ತಾ, ಜಿಲ್ಲೆಯಲ್ಲಿ 300 ಅಡಿ ಕೊರೆದರೂ ಸಹ ನೀರು ಬರುತ್ತಿಲ್ಲ. ಕೊಳವೆ ಬಾವಿ ಕೊರೆಯಲು ಈಗ ನಿಗದಿಪಡಿಸಿರುವ ಅನುದಾನ ಸಾಕಾಗುವುದಿಲ್ಲವೆಂದು ತಿಳಿಸಿದರು. | |

| | | | |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿಯ ಎಲ್ಲಾ ಸದಸ್ಯರುಗಳ ದೂರವಾಣಿ ಸಂಖ್ಯೆಗಳನ್ನು ತಮ್ಮ ಮೊಬೈಲಿನಲ್ಲಿ ಅಳವಡಿಸಿಕೊಂಡು, ಕಾಮಗಾರಿಗಳ ಅನುಷ್ಠಾನದ ಬಗ್ಗೆ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತರಬೇಕೆಂದು ಸಹಾಯಕ ಕಾರ್ಯಪಾಲಕ ಅಭಿಯಂತರರು, ಚನ್ನರಾಯಪಟ್ಟಣ ಉಪ ವಿಭಾಗರವರಿಗೆ ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಅಮಿತ್ ಕುಮಾರ್‌ಶೆಟ್ಟಿರವರು ಮಾತನಾಡುತ್ತಾ, ಬೇಲೂರು ತಾಲ್ಲೂಕಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ತೆರೆದ ಬಾವಿಗಳನ್ನು ಅನುಷ್ಠಾನ ಮಾಡಲು ಪ್ರಸ್ತಾವನೆಯನ್ನು ಸಿದ್ಧಪಡಿಸಿ ಸಲ್ಲಿಸಬೇಕೆಂದು ಕೋರಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಎಲ್ಲಾ ಜಿಲ್ಲಾ ಪಂಚಾಯಿತಿ ಸದಸ್ಯರುಗಳ ದೂರವಾಣಿ ಸಂಖ್ಯೆಯನ್ನು ತಮ್ಮ ಮೊಬೈಲಿನಲ್ಲಿ ಅಳವಡಿಸಿಕೊಂಡು ಅವರು ಕರೆ ಮಾಡಿದಾಗ ಸ್ವೀಕರಿಸಿ ಅವರ ಸಮಸ್ಯೆಗಳಿಗೆ ಪರಿಹಾರವನ್ನು ನೀಡಲು ಕ್ರಮ ವಹಿಸಬೇಕೆಂದು ತಿಳಿಸಿದರು. | |
| 10. | **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು.** | | |
| 1 | 2ನೇ ಅವಧಿಗೆ ಜಿಲ್ಲಾ ಪಂಚಾಯಿತಿಯ ವಿವಿಧ ಸ್ಥಾಯಿ ಸಮಿತಿಗಳನ್ನು ರಚಿಸುವ ಬಗ್ಗೆ. | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ಮೊದಲನೇ ಅವಧಿಗೆ ರಚನೆಯಾಗಿದ್ದ ವಿವಿಧ ಸ್ಥಾಯಿ ಸಮಿತಿಗಳ ಅವಧಿಯು ದಿನಾಂಕ: 11-01-2013ಕ್ಕೆ ಮುಕ್ತಾಯವಾಗುತ್ತದೆ. ಆದ್ದರಿಂದ, 2ನೇ ಅವಧಿಗೆ ಸ್ಥಾಯಿ ಸಮಿತಿಗಳ ರಚನೆಯಾಗಬೇಕಾಗಿದ್ದು, ಸಭೆಯು ನಿರ್ಣಯಿಸಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ 2ನೇ ಅವಧಿಗೆ ವಿವಿಧ ಸ್ಥಾಯಿ ಸಮಿತಿಗಳ ರಚನೆಗೆ ಸಂಬಂಧಿಸಿದಂತೆ, ಪೂರ್ಣ ಅಧಿಕಾರವನ್ನು ಮಾನ್ಯ ಅಧ್ಯಕ್ಷರಿಗೆ ನೀಡಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |
| 2 | ಅಂತರರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಲು ಸಹಾಯಧನ ನೀಡುವ ಬಗ್ಗೆ. | ಶ್ರೀಮತಿ ಹೆಚ್.ಕೆ.ಪುಷ್ಪ ಬಿನ್ ದಿ: ರಾಧಾಕೃಷ್ಣಮೂರ್ತಿ ಇವರು ದಿನಾಂಕ: 02-11-2012ರಿಂದ 07-11-2012ರವರೆಗೆ ಚೀನಾ ದೇಶದ ತೈಪೆಯಲ್ಲಿ ನಡೆಯಲಿರುವ 17ನೇ ಏಷ್ಯನ್ ಮಾಸ್ಟರ್ ಅಥ್ಲೆಟಿಕ್ ಸಂಸ್ಥೆಯಲ್ಲಿ ಭಾಗವಹಿಸಲು ಭಾರತ ತಂಡದಿಂದ ಆಯ್ಕೆಯಾಗಿದ್ದು, ಅಂತರರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಲು ಜಿಲ್ಲಾ ಪಂಚಾಯಿತಿ ವತಿಯಿಂದ ಆರ್ಥಿಕ ಸಹಾಯವನ್ನು ನೀಡುವಂತೆ ಮನವಿ ಸಲ್ಲಿಸಿದ್ದು, ಇವರಿಗೆ ದಿನಾಂಕ: 22-11-2012ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯಲ್ಲಿ ರೂ.5000/- ಸಹಾಯಧನ ನೀಡಲು ತೀರ್ಮಾನಿಸಲಾಗಿದೆ. ಆದರೆ, ಅಂತರರಾಷ್ಟ್ರೀಯ ಕ್ರೀಡೆಯಲ್ಲಿ ಭಾಗವಹಿಸಲು ರೂ.5000/-ಗಳ ಸಹಾಯಧನ ಕಡಿಮೆಯಾಗಿದ್ದು, ರೂ.5000/-ಗಳ ಬದಲಿಗೆ ರೂ.10000/-ಗಳ ಸಹಾಯಧನವನ್ನು ನೀಡಲು ಸಭೆಯಲ್ಲಿ ಒಪ್ಪಿಗೆಯನ್ನು ನೀಡಲಾಯಿತು. | ಸಭೆಯಲ್ಲಿ ಚರ್ಚಿಸಿದಂತೆ, ಶ್ರೀಮತಿ ಹೆಚ್.ಕೆ. ಪುಷ್ಪ ಬಿನ್ ದಿ: ರಾಧಾಕೃಷ್ಣ ಮೂರ್ತಿ ಇವರು ದಿ: 02-11-12 ರಿಂದ 07-11-12 ರವರೆಗೆ ಚೀನಾ ದೇಶದ ತೈಪೆಯಲ್ಲಿ ನಡೆಯಲಿರುವ 17ನೇ ಏಷ್ಯನ್ ಮಾಸ್ಟರ್ ಅಥ್ಲೆಟಿಕ್ಸ್ ಸಂಸ್ಥೆಯಲ್ಲಿ ಭಾಗವಹಿಸಲು ಜಿಲ್ಲಾ ಪಂಚಾಯಿತಿ ವತಿಯಿಂದ ರೂ.10000/- ಗಳ (ರೂ ಹತ್ತು ಸಾವಿರ ಮಾತ್ರ)ಗಳ ಸಹಾಯಧನ ವನ್ನು ನೀಡಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸಲಾಯಿತು. |

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಆಲೂರು ಮತ್ತು ಸಕಲೇಶಪುರ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಯೋಜನೆಗಳಿಗೆ ವಿದ್ಯುದ್ದೀಕರಣ ಸೌಲಭ್ಯವನ್ನು ಒದಗಿಸಲು ಠೇವಣಿ ಹಣವನ್ನು ಚೆಸ್ಕಾಂಗೆ ಪಾವತಿ ಮಾಡಲಾಗಿದೆ ಎಂದು ವಿವರ ನೀಡಿದರು.

ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿಯವರು ಮಾತನಾಡುತ್ತಾ, ಪಶುಪಶಂಗೋಪನಾ ಇಲಾಖೆಯ ವತಿಯಿಂದ ಉಚಿತವಾಗಿ ಮೇವು ಕಟ್ಟರ್ ಯಂತ್ರವನ್ನು ಮತ್ತು ಹಾಲು ಕರೆಯುವ ಯಂತ್ರಗಳನ್ನು ನೀಡಿರುತ್ತಾರೆ. ಯಾವ ಯಾವ ತಾಲ್ಲೂಕುಗಳಿಗೆ ಎಷ್ಟೆಷ್ಟು ನೀಡಿರುತ್ತಾರೆ ಎಂಬ ಬಗ್ಗೆ ಉಪ ನಿರ್ದೇಶಕರು, ಪಶು ಸಂಗೋಪನಾ ಇಲಾಖೆಯವರು ಮಾಹಿತಿಯನ್ನು ನೀಡಬೇಕೆಂದು ಕೋರಿದರು.

ಉಪ ನಿರ್ದೇಶಕರು, ಪಶು ಸಂಗೋಪನಾ ಇಲಾಖೆರವರು ಮಾತನಾಡುತ್ತಾ, ಆರ್.ಕೆ.ವಿ.ವೈ ಯೋಜನೆಯಡಿ ಮೇವು ಕಟ್ಟರ್ ಯಂತ್ರ ಮತ್ತು ಹಾಲು ಕರೆಯುವ ಯಂತ್ರಗಳು ಮಂಜೂರಾಗಿದ್ದು, ಅವುಗಳನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ಮಾನ್ಯ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಮಿತಿಯಿದ್ದು, ಸಹಾಯಕ ನಿರ್ದೇಶಕರು ನೀಡಿದ ಫಲಾನುಭವಿಗಳ ಪಟ್ಟಿಗೆ ಜಿಲ್ಲಾಧಿಕಾರಿಯವರಿಂದ ಅನುಮೋದನೆಯನ್ನು ಪಡೆದು ಮೇವು ಕಟ್ಟರ್ ಯಂತ್ರ ಮತ್ತು ಹಾಲು ಕರೆಯುವ ಯಂತ್ರಗಳನ್ನು ವಿತರಣೆ ಮಾಡಲಾಗಿದೆ ಎಂದು ಸಭೆಗೆ ವಿವರ ನೀಡಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಆರ್.ಕೆ.ವಿ.ವೈ ಯೋಜನೆಯಡಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಉಪಾಧ್ಯಕ್ಷರಿರುತ್ತಾರೆ. ಆದ್ದರಿಂದ ಇನ್ನು ಮುಂದೆ ಆರ್.ಕೆ.ವಿ.ವೈ. ಯೋಜನೆಯಡಿಯಲ್ಲಿ ಸವಲತ್ತುಗಳನ್ನು ವಿತರಿಸಬೇಕಾದಲ್ಲಿ ಜಿಲ್ಲಾ ಪಂಚಾಯಿತಿ ಸದಸ್ಯರಿಂದ ಫಲಾನುಭವಿಗಳ ಪಟ್ಟಿಯನ್ನು ಪಡೆದು ಕ್ರಮ ವಹಿಸಬೇಕೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ಎ.ಬಿ.ನಂಜುಂಡೇಗೌಡರು ಮಾತನಾಡುತ್ತಾ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಚನ್ನರಾಯಪಟ್ಟಣ ಉಪ ವಿಭಾಗರವರು ಸಮರ್ಪಕವಾಗಿ ಕೆಲಸ ನಿರ್ವಹಿಸುತ್ತಿಲ್ಲ ಮತ್ತು ದೂರವಾಣಿ ಕರೆಯನ್ನು ಮಾಡಿದರೂ ಸಹ ಸ್ವೀಕರಿಸುವುದಿಲ್ಲ. ಮತ್ತು ಉತ್ತರವನ್ನೂ ಸಹ ನೀಡುವುದಿಲ್ಲ. ಅಲ್ಲದೆ ನಮ್ಮ ಕ್ಷೇತ್ರದಲ್ಲಿ ಕಾಮಗಾರಿಗಳನ್ನು ಅನುಷ್ಠಾನ ಮಾಡುತ್ತಿದ್ದು ತಮ್ಮ ಗಮನಕ್ಕೆ ತರುತ್ತಿಲ್ಲವೆಂದು ತಿಳಿಸಿದರು.

ಮಾನ್ಯ ಸದಸ್ಯರಾದ ಶ್ರೀ ರಂಗಸ್ವಾಮಿರವರು ಮಾತನಾಡುತ್ತಾ, ತಮ್ಮ ಕ್ಷೇತ್ರಕ್ಕೆ ಎಲ್ಲಾ ಕಾಮಗಾರಿಗಳಿಗೂ ಸೇರಿ ಸುಮಾರು ರೂ.15.00ಲಕ್ಷಗಳ ಕಾಮಗಾರಿಯನ್ನು ಮಾತ್ರ ನೀಡಿದ್ದು, ಅಧ್ಯಕ್ಷರ ಅನುದಾನದಲ್ಲಿ ಎರಡು/ ಮೂರು ಪಟ್ಟು ಅನುದಾನದಲ್ಲಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲಾಗುತ್ತಿದ್ದು, ತಮ್ಮ ಗಮನಕ್ಕೆ ತರುತ್ತಿಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿದರು.

| | | | |
|---|---|---|---|
| | | ನಂತರ ಟ್ರೆಂಚ್ ಹೊಡೆಸಲು ಮತ್ತು ಟ್ರೆಂಚ್‌ಗಳ ಸುತ್ತಲೂ ಗಿಡಗಳನ್ನು ನೆಡಲು ಸುಮಾರು ರೂ.12.00ಕೋಟಿಗಳ ಕ್ರಿಯಾ ಯೋಜನೆಯನ್ನೂ ಸಹ ಸಿದ್ದಪಡಿಸಲಾಗಿದೆ ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಸರ್ವೆ ಮಾಡಿಸಿದ್ದು, ಇವರೂ ಸಹ ಒತ್ತುವರಿ ಜಾಗವನ್ನು ಗುರುತಿಸದೇ ಕೆರೆ ಒಳಗೇ ಟ್ರೆಂಚ್ ಮಾಡಿಸಿದ್ದು, ಇದರಿಂದ, ಯಾವುದೇ ಅನುಕೂಲವಾಗಿರುವುದಿಲ್ಲವೆಂದು ತಿಳಿಸಿದರು.<br>ರುದ್ರಭೂಮಿಗೆ ಜಾಗದ ಅವಶ್ಯಕತೆಯಿರುವ ಕಡೆಗಳಲ್ಲಿ ಸರ್ಕಾರಿ ಜಾಗವಿದ್ದಲ್ಲಿ ಅಂತಹ ಜಾಗವನ್ನು ರುದ್ರಭೂಮಿಗೆ ಮಂಜೂರು ಮಾಡಿಕೊಡುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. ಈ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಯವರು ಕ್ರಮ ವಹಿಸಬೇಕಾಗಿದ್ದು, ರುದ್ರಭೂಮಿಗಾಗಿ ಭೂಮಿಯನ್ನು ಮೀಸಲಿರಿಸಲು ಅದೇಶವನ್ನು ಮಾಡಬೇಕೆಂದು ಸಭೆಯಲ್ಲಿ ತೀರ್ಮಾನಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀ ರಂಗಸ್ವಾಮಿರವರು ಮಾತನಾಡುತ್ತಾ, ನಿರ್ಮಲ ಭಾರತ ಅಭಿಯಾನ ಯೋಜನೆಯಡಿ ಪ್ರತಿ ಗ್ರಾಮ ಪಂಚಾಯಿತಿಗೆ ಎಷ್ಟು ಗುರಿ ನಿಗಧಿಪಡಿಸಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ನಿರ್ಮಲ ಭಾರತ ಅಭಿಯಾನ **ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ ಸಹಯೋಗದಲ್ಲಿ ಘಟಕ ವೆಚ್ಚ** ರೂ.9200/-ರಂತೆ ಪ್ರತಿ ಗ್ರಾಮ ಪಂಚಾಯಿತಿಗೆ 100 ಶೌಚಾಲಯಗಳ ಗುರಿಯನ್ನು ನೀಡಲಾಗಿದೆ. ಆದರೆ, ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಶೌಚಾಲಯಗಳನ್ನು ನಿರ್ಮಾಣ ಮಾಡದೇ ಹಾಗೆಯೇ ಬಿಲ್ಲನ್ನು ಮಾಡಿರುತ್ತಾರೆ. ಸಕಲೇಶಪುರ ತಾಲ್ಲೂಕು ಕ್ಯಾಮನಹಳ್ಳಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಶೌಚಾಲಯಗಳನ್ನು ಕಟ್ಟದೇ ಇದ್ದರೂ ಸಹ ಬಿಲ್ ಮಾಡಿರುತ್ತಾರೆ. ಆದ್ದರಿಂದ ಅವರ ಮೇಲೆ ಶಿಸ್ತುಕ್ರಮ ತೆಗೆದುಕೊಂಡು ಅಮಾನತ್ತಿನಲ್ಲಿಡಲಾಗಿದೆ.<br>ಮಾನ್ಯ ಸದಸ್ಯರಾದ ಶ್ರೀ ರಂಗಸ್ವಾಮಿರವರು ಮಾತನಾಡುತ್ತಾ, ನಿರ್ಮಲ ಭಾರತ ಅಭಿಯಾನ ಯೋಜನೆಯ ಬಗ್ಗೆ ಸಾಕಷ್ಟು ಪ್ರಚಾರವನ್ನು ನೀಡುತ್ತಿಲ್ಲ. ಈ ಬಗ್ಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿದರು.<br>ಉಪ ಕಾರ್ಯದರ್ಶಿ (ಅಭಿವೃದ್ಧಿ)ರವರು ಮಾತನಾಡುತ್ತಾ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುಷ್ಠಾನ ಮಾಡುವ ಶೌಚಾಲಯ ಕಾಮಗಾರಿಯಲ್ಲಿ ಮೊದಲಿಗೆ. ಕಾಮಗಾರಿ ಪ್ರಗತಿ ಹಂತದಲ್ಲಿ ಮತ್ತು ಮುಕ್ತಾಯದ ಹಂತದಲ್ಲಿ ಫಲಾನುಭವಿಯ ಛಾಯಾಚಿತ್ರವನ್ನು ತೆಗೆಯಬೇಕಾಗಿರುತ್ತದೆ. ಇ.ಎಫ್.ಎಂ.ಎಸ್ ಮೂಲಕ ಹಣವು ಫಲಾನುಭವಿಗೆ ಪಾವತಿಯಾಗುತ್ತದೆ ಎಂದು ವಿವರಣೆ ನೀಡಿದರು. | |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ವಿವಿಧ ಯೋಜನೆ/ ಕಾರ್ಯಕ್ರಮಗಳ ಬಗ್ಗೆ ಸಮರ್ಪಕ ಮಾಹಿತಿಯಿರುವುದಿಲ್ಲ. ಆದ್ದರಿಂದ ಸದಸ್ಯರುಗಳಿಗೆ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ, ತರಬೇತಿಯನ್ನು ನೀಡುವುದು ಸೂಕ್ತವೆಂದು ಅಭಿಪ್ರಾಯಪಡುತ್ತಾ, ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರಿವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಈ ಮೊದಲೇ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಂಡು ಕೆ.ಪಿ.ಆರ್. ಆಕ್ಟ್, ಮಾಹಿತಿ ಹಕ್ಕು ಅಧಿನಿಯಮ ಮತ್ತು ಇತರೆ ಮಾಹಿತಿ ಪುಸ್ತಕಗಳನ್ನು ನೀಡಲಾಗಿದೆ. ಇನ್ನೂ ಮಾಹಿತಿ ಬೇಕೆಂದಲ್ಲಿ ತಾಲ್ಲೂಕು ಮಟ್ಟದಲ್ಲಿ ನೋಡಲ್ ಅಧಿಕಾರಿಯವರಿಂದ ಜಿಲ್ಲಾ ಪಂಚಾಯಿತಿ ಸದಸ್ಯರಿಗೆ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಂಡು ಪೂರ್ಣ ಮಾಹಿತಿಯನ್ನು ನೀಡಲು ತಿಳಿಸಲಾಗುವುದು ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಇಂಧಿರಾಧರ್ಮಪ್ಪರವರು ಮಾತನಾಡುತ್ತಾ, ಬೇಲೂರು ತಾಲ್ಲೂಕಿನಲ್ಲಿ ಕೆರೆ ಒತ್ತುವರಿ ಮಾಡಿರುವ ಬಗ್ಗೆ ಪತ್ರಿಕೆಗಳಲ್ಲಿ ಪ್ರಕಟಣೆಯಾಗಿರುತ್ತದೆ. ಬೇಲೂರು ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿಯ ಒಬ್ಬ ವ್ಯಕ್ತಿ ಮರಣ ಹೊಂದಿದ್ದು, ಅಂತಿಮ ಸಂಸ್ಕಾರ ಮಾಡಲು ಸ್ಮಶಾನಕ್ಕೆ ಜಾಗವಿಲ್ಲದೆ ಮೃತದೇಹವನ್ನು ಮನೆಯಲ್ಲಿಯೇ ಇಟ್ಟುಕೊಳ್ಳುವ ಪರಿಸ್ಥಿತಿ ಉಂಟಾಗಿತ್ತು. ಆರ್ಥಿಕವಾಗಿ ಸಭಲರಾಗಿರುವವರು ಸ್ಮಶಾನದ ಜಾಗವನ್ನು ಒತ್ತುವರಿ ಮಾಡಿಕೊಂಡಿರುತ್ತಾರೆ. ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕೆರೆಗಳಲ್ಲಿ ಶೇ.90ರಷ್ಟು ಒತ್ತುವರಿಯಾಗಿದೆ ಎಂಬ ಮಾಹಿತಿ ಇರುತ್ತದೆ. ಕೆರೆಗಳನ್ನು ಖಾಸಗಿಯವರಿಂದ ಸರ್ವೆ ಮಾಡಿಸಲು ಜಿಲ್ಲಾಧಿಕಾರಿಯವರು ರೂ.16.00ಲಕ್ಷಗಳ ಅನುದಾನವನ್ನು ಜಿಲ್ಲಾ ಪಂಚಾಯಿತಿಯಿಂದ ನೀಡುವಂತೆ ಕೇಳಿರುತ್ತಾರೆ. ಜಿಲ್ಲೆಯಲ್ಲಿ ಸುಮಾರು 3000 ಒತ್ತುವರಿ ಕೆರೆಗಳನ್ನು ಸರ್ವೆ ಮಾಡಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಜಿಲ್ಲಾಧಿಕಾರಿಯವರಿಗೂ ಸಹ ಪತ್ರ ಬರೆಯಲಾಗಿದೆ. ಆದರೆ, ಜಿಲ್ಲಾಧಿಕಾರಿಯವರು ಸರ್ವೆ ಮಾಡಿಸಲು ಯಾವುದೇ ಅನುದಾನ ಇರುವುದಿಲ್ಲವೆಂದು ತಿಳಿಸಿರುತ್ತಾರೆ. ಕೆರೆಗಳು ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಬರುತ್ತವೆ ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತಾ, ಜಿಲ್ಲಾ ಪಂಚಾಯಿತಿಯಿಂದ ಅನುದಾನವನ್ನು ನೀಡಿದರೂ ಸಹ ಪ್ರಾಮಾಣಿಕವಾಗಿ ಸರ್ವೆ ಮಾಡುತ್ತಾರೆ ಎಂಬ ಬಗ್ಗೆ ಏನು ಖಾತರಿ ಎಂದು ಕೇಳಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಸಮರ್ಪಕವಾಗಿ ಒತ್ತುವರಿ ಸರ್ವೆ ಮಾಡಲಾಗುವುದು ಎಂಬ ಬಗ್ಗೆ ಘನ ಉಚ್ಚ ನ್ಯಾಯಾಲಯಕ್ಕೆ ಪ್ರಮಾಣ ಪತ್ರವನ್ನು ನೀಡಲಾಗಿದೆ. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಸರ್ವೆ ಮಾಡಿದ | ಸಭೆಯಲ್ಲಿ ಚರ್ಚಿಸಿದಂತೆ, ಪರಿಶಿಷ್ಟ ಜಾತಿಯವರಿಗೆ ರುದ್ರಭೂಮಿಗಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಾಗವನ್ನು ರುದ್ರಭೂಮಿಗೆ ಮೀಸಲಿರಿಸಲು ಆದೇಶವನ್ನುನೀಡುವ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಗಳಿಗೆ ಮತ್ತು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು |

| | | | |
|---|---|---|---|
| | | ಮುಂದುವರೆದು, ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ, ಎಸ್.ಎಸ್.ಎ ಅಡಿಯಲ್ಲಿ ಗುತ್ತಿಗೆ ಆಧಾರದಲ್ಲಿ ಇಂಜಿನಿಯರ್ ನೇಮಕ ಮಾಡಿದ್ದು, ಪ್ರತಿ ಶಾಲೆಗೆ ಎಂ.ಬಿ ಪುಸ್ತಕವನ್ನು ನೀಡಲಾಗಿದೆ ಎಂದು ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಎಸ್.ಎಸ್.ಎ ಅಡಿಯಲ್ಲಿ ಅನುಷ್ಠಾನ ಮಾಡುವ ಕಾಮಗಾರಿಗಳ ಅಂತಿಮ ಬಿಲ್ಲಿಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಇಂಜಿನಿಯರ್‌ರವರಿಂದ ದೃಡೀಕರಣ ನೀಡುವ ಬಗ್ಗೆ ಸಭೆಯಲ್ಲಿ ನಿರ್ಣಯವನ್ನು ಮಾಡಬೇಕೆಂದು ಕೋರಿದರು. | |
| 5 | ದಿನಾಂಕ: 21-11-2012 ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ: 21-11-2012 ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಅಧ್ಯಕ್ಷರಾದ ಶ್ರೀ ಬಿಳಿಚೌಡಯ್ಯರವರು ಸಭೆಗೆ ನಡವಳಿಗಳನ್ನು ಮಂಡಿಸಿದರು ಮತ್ತು ಶ್ರೀಮತಿ ಜಿ.ಟಿ.ಇಂದಿರಾ ಧರ್ಮಪ್ಪರವರು ಸಭೆಯ ನಡವಳಿಗಳನ್ನು ಅನುಮೋದಿಸಿದರು. | ಸಭೆಯಲ್ಲಿ ವಿಷಯದ ಬಗ್ಗೆ ವಿವರವಾಗಿ ಚರ್ಚಿಸಲಾಯಿತು.<br>ದಿ:21-11-2012ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಬಹುಮತದ ತೀರ್ಮಾನದಂತೆ ಅನುಮೋದಿಸಿತು. |
| 6. | ದಿನಾಂಕ: 20-11-2012 ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ: 20-11-2012 ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಸ್ವಾಮಿಗೌಡರವರು ಸಭೆಗೆ ಮಂಡಿಸಿದರು. **ಮಾನ್ಯ ಸದಸ್ಯರಾದ ಶ್ರೀಮತಿ ಹೇಮಾವತಿ ಮಂಜುನಾಥ್‌ರವರು ಅನುಮೋದಿಸಿದರು.** | ಸಮಗ್ರವಾಗಿ ಚರ್ಚಿಸಿದ ನಂತರ ದಿನಾಂಕ: 20-11-2012 ರಂದು **ನಡೆದ ಶಿಕ್ಷಣ ಮತ್ತು ಆರೋಗ್ಯ** ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |
| 7. | ದಿ:21-11-2012 ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ: 21-11-2012 ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ ಹುಚ್ಚೇಗೌಡರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿ ರವರು ಅನುಮೋದಿಸಿದರು. | ಸಮಗ್ರವಾಗಿ ಚರ್ಚಿಸಿದ ನಂತರ ದಿನಾಂಕ:21-11-2012 ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |
| 8. | ದಿ: 20-11-2012ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ: 20-11-2012 ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಸಮಿತಿ ಅಧ್ಯಕ್ಷರಾದ ಶ್ರೀ.ಎಂ.ಕೆ.ದೇವಪ್ಪ ಮಲ್ಲಿಗೆವಾಳುರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಎ.ಬಿ.ನಂಜುಂಡೇಗೌಡರು ಅನುಮೋದಿಸಿದರು. | ಸಮಗ್ರ ಚರ್ಚೆಯ ನಂತರ ದಿ: 20-11-2012ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |

ಮಾನ್ಯ ಸದಸ್ಯರಾದ ಶ್ರೀ ರಂಗಸ್ವಾಮಿರವರು ಮಾತನಾಡುತ್ತಾ, ಎಸ್.ಎಸ್.ಎ ಅಡಿಯಲ್ಲಿ ಅಗತ್ಯ ಇಲ್ಲದೇ ಇರುವ ಶಾಲೆಗಳಿಗೆ ಕಾಂಪೌಂಡ್ ನಿರ್ಮಾಣ ಮಾಡಿದ್ದಾರೆ. ಆದರೆ, ಅವಶ್ಯಕತೆಯಿರುವ ಕಡೆಗಳಲ್ಲಿ ಕಾಂಪೌಂಡ್ ನಿರ್ಮಾಣ ಮಾಡಿರುವುದಿಲ್ಲ. ಅದೇ ರೀತಿ ಕಾರೇಹಳ್ಳಿಯಲ್ಲಿ 120 ಮಕ್ಕಳು ಇದ್ದರೂ ಹೆಚ್ಚುವರಿ ಕೊಠಡಿಗಳನ್ನು ನಿರ್ಮಾಣ ಮಾಡಿರುವುದಿಲ್ಲ. 9 ಮಕ್ಕಳಿರುವ ಶಾಲೆಗೆ ಹೆಚ್ಚುವರಿ ಕೊಠಡಿಗಳನ್ನು ನಿರ್ಮಾಣ ಮಾಡಿದ್ದಾರೆ. ಆದ್ದರಿಂದ, ಅಧಿಕಾರಿಗಳು ಜನಪ್ರತಿನಿಧಿಗಳ ಸಲಹೆಯನ್ನು ಪಡೆದು ಕ್ರಮ ವಹಿಸಬೇಕೆಂದು ಕೋರಿದರು.

ಮಾನ್ಯ ಸದಸ್ಯರಾದ ಶ್ರೀಮತಿ ಜ್ಯೋತಿ ಗುರುದೇವ್‌ರವರು ಮಾತನಾಡುತ್ತಾ, ಪ್ರತಿ ಸಭೆಯಲ್ಲಿಯೂ ಸಹ ಚರ್ಚೆ ನಡೆಸಲಾಗುತ್ತದೆ. ಆದರೆ, ಚರ್ಚೆ ನಡೆಸಿದ ವಿಷಯಗಳ ಮೇಲೆ ಯಾವುದೇ ಕ್ರಮ ವಹಿಸುವುದಿಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿದರು.

ಮಾನ್ಯ ಸದಸ್ಯರಾದ ಶ್ರೀ ಲಕ್ಷ್ಮಣಗೌಡರವರು ಮಾತನಾಡುತ್ತಾ, ಎಸ್.ಎಸ್.ಎ ಅಡಿಯಲ್ಲಿ ಕಟ್ಟಡಗಳನ್ನು ಬದಲಾವಣೆ ಮಾಡಲು ಅವಕಾಶವಿದೆಯೇ? ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಎಸ್.ಎಸ್.ಎ ಅಡಿಯಲ್ಲಿ ಮಂಜೂರಾಗುವ ಕಾಮಗಾರಿಗಳು ಕೇಂದ್ರಸರ್ಕಾರದಿಂದ ಅನುಮೋದನೆಯಾಗುವುದರಿಂದ, ಕಾಮಗಾರಿಗಳ ಬದಲಾವಣೆಗೆ ಅವಕಾಶವಿರುವುದಿಲ್ಲ. ಪ್ರಸಕ್ತ ಸಾಲಿನಲ್ಲಿ ಕಟ್ಟಡಗಳ ದುರಸ್ಥಿಗೆ ಲಭ್ಯವಿರುವ ರೂ.1.50ಕೋಟಿಗಳ ಅನುದಾನದಲ್ಲಿ ಅನುಷ್ಠಾನ ಮಾಡುವ ದುರಸ್ಥಿ ಕಾಮಗಾರಿಗಳು ಸಮರ್ಪಕವಾಗಿ ಆಗುತ್ತಿವೆಯೇ, ಕಾಮಗಾರಿಗಳು ಪ್ರಗತಿಯಾಗಿವೆಯೇ? ಎಂಬ ಬಗ್ಗೆ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳು ಮೇಲ್ವಿಚಾರಣೆಯನ್ನು ನಡೆಸಬಹುದಾಗಿರುತ್ತದೆ. ಈ ಬಗ್ಗೆ ಜಿಲ್ಲಾ ಪಂಚಾಯಿತಿ ಸದಸ್ಯರ ಗಮನಕ್ಕೆ ತರುವಂತೆ ಮತ್ತು 2013–14ನೇ ಸಾಲಿಗೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸುವಾಗ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರಿಂದ ಕಾಮಗಾರಿಗಳ ಪಟ್ಟಿಯನ್ನು ಪಡೆದು ನಿಗದಿತ ನಮೂನೆಯಲ್ಲಿ ಅಳವಡಿಸಿ ಪ್ರಸ್ತಾವನೆಯನ್ನು ಅಂತಿಮಗೊಳಿಸುವಂತೆ ಕ್ರಮವಹಿಸುಂತೆ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚನೆ ನೀಡಲಾಗಿರುತ್ತದೆ ಎಂದು ಸಭೆಗೆ ವಿವರ ನೀಡಿದರು.

ಮಾನ್ಯ ಉಪಾಧ್ಯಕ್ಷರು ಮಾತನಾಡುತ್ತಾ, 2012–13ನೇ ಸಾಲಿನಲ್ಲಿ ಸೇರಿರುವ ಕಾಮಗಾರಿಗಳನ್ನು ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. 2013–14ನೇ ಸಾಲಿನ ಕ್ರಿಯಾ ಯೋಜನೆಯನ್ನು ಮಾಡುವಾಗ ಅವಶ್ಯ ಕಾಮಗಾರಿಗಳನ್ನು ಸೇರಿಸಲು ಕ್ರಮ ವಹಿಸಬಹುದಾಗಿದೆ ಎಂದು ತಿಳಿಸಿದರು.

ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆರವರು ಮಾತನಾಡುತ್ತಾ, 2013–14ನೇ ಸಾಲಿಗೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸುವಾಗ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರಿಂದ ಕಾಮಗಾರಿಗಳ ಪಟ್ಟಿಯನ್ನು ಪಡೆದು DIES ನಮೂನೆಯಲ್ಲಿ ಅಳವಡಿಸಿ ಕೇಂದ್ರಸರ್ಕಾರಕ್ಕೆ ಅನುಮೋದನೆಗೆ ಕಳುಹಿಸಲು ಕ್ಷೇತ್ರ ಶಿಕ್ಷಣಾಧಿಕಾರಿಯವರಿಗೆ ನಿರ್ದೇಶನ ನೀಡಲಾಗಿದೆ ಎಂದು ವಿವರ ನೀಡಿದರು. 2012–13ನೇ ಸಾಲಿನ ಕಾಮಗಾರಿಗಳ ಬದಲಾವಣೆಗೆ ಅವಕಾಶವಿಲ್ಲವೆಂದು ತಿಳಿಸಿದರು.

| | | | |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಶ್ರವಣಬೆಳಗೊಳ ಗ್ರಾಮದಲ್ಲಿ ಬಹುಗ್ರಾಮ ಯೋಜನೆಯಿದ್ದು, ಸದರಿ ಯೋಜನೆಯಿಂದ ಇನ್ನೂ 30-40 ಗ್ರಾಮಗಳಿಗೆ ನೀರಿನ ಸರಬರಾಜು ಮಾಡಬಹುದಾಗಿರುತ್ತದೆ. ಸರ್ಕಾರದಿಂದ ಈ ಯೋಜನೆಯನ್ನು ಅನುಷ್ಠಾನ ಮಾಡಲು ಅನುಮೋದನೆ ಸಿಕ್ಕಿದ್ದು, ಜಿಲ್ಲಾ ಪಂಚಾಯಿತಿ ಹಂತದಲ್ಲಿಯೇ ಕ್ರಮ ವಹಿಸಬೇಕಾಗಿರುತ್ತದೆ. ಆದ್ದರಿಂದ, ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು, ಚನ್ನರಾಯಪಟ್ಟಣ ವಿಭಾಗ ಇವರೊಂದಿಗೆ ಸಭೆಯನ್ನು ನಡೆಸಿ ಸ್ಥಳ ಪರಿಶೀಲನೆ ಮಾಡಿ ಕ್ರಮ ವಹಿಸಲಾಗುವುದು ಎಂದು ಸಭೆಗೆ ವಿವರ ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರು ಮಾತನಾಡುತ್ತಾ, ಕರ್ನಾಟಕ ಮೂಲ ಸೌಕರ್ಯಗಳ ಇಲಾಖೆಯವರು ಸ್ವಂತವಾಗಿ ಕೆಲಸಗಳನ್ನು ಅನುಷ್ಠಾನ ಮಾಡುವುದಿಲ್ಲ ಬದಲಿಗೆ ಅವರೂ ಕೂಡ ಸಬ್ ಕಂಟ್ರಾಕ್ಟ್ ನೀಡಿ ಕಾಮಗಾರಿಗಳನ್ನು ಅನುಷ್ಠಾನ ಮಾಡುತ್ತಾರೆ. ಸುವರ್ಣ ಗ್ರಾಮೋದಯ ಯೋಜನೆಯಡಿ ಕಾಮಗಾರಿಗಳನ್ನು ಇನ್ನೂ ಪೂರ್ಣಗೊಳಿಸಿರುವುದಿಲ್ಲ. ಆದ್ದರಿಂದ, ಎಲ್ಲಾ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಮೂಲಕವೇ ಅನುಷ್ಠಾನ ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು.<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್‌ರವರು ಮಾತನಾಡುತ್ತಾ, ಸರ್ಕಾರದ ಹಂತದಲ್ಲಿ ಯಾವುದಾದರೂ ಯೋಜನೆಗೆ ಅನುಮೋದನೆ ದೊರೆಯಬೇಕಾಗಿದ್ದಲ್ಲಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷರು/ಸದಸ್ಯರುಗಳ ನಿಯೋಗ ಹೋಗಿ ಚರ್ಚಿಸಿ ಅನುಮೋದನೆ ಪಡೆಯಲು ಕ್ರಮ ವಹಿಸುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. | |
| 4 | ದಿ:22-11-2012 ರಂದು ನಡೆದ ಹಣಕಾಸು, ಲೆಕ್ಕ ಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ. | ದಿನಾಂಕ:02-7-2012 ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಮಾನ್ಯ ಅಧ್ಯಕ್ಷರಾದ ಶ್ರೀಮತಿ ಡಿ.ಜಿ.ಅಂಬಿಕ ರಾಮಣ್ಣರವರು ಸಭೆಗೆ ಮಂಡಿಸಿದರು. ಮಾನ್ಯ ಸದಸ್ಯರಾದ ಶ್ರೀ ಎನ್.ಡಿ.ಕಿಶೋರ್‌ರವರು ಸಭಾ ನಡವಳಿಗಳನ್ನು ಅನುಮೋದಿಸಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಆರ್.ಐ.ಡಿ.ಎಫ್ ಅಡಿಯಲ್ಲಿ ಪ್ರೌಢಶಾಲಾ ಕೊಠಡಿಗಳ ನಿರ್ಮಾಣಕ್ಕೆ ರೂ.114.00ಲಕ್ಷಗಳು ಲಭ್ಯವಿದ್ದು, ಎಸ್.ಡಿ.ಎಂ.ಸಿ ವತಿಯಿಂದ ಸಕಲೇಶಪುರ ತಾಲ್ಲೂಕು ಮಾರನಹಳ್ಳಿ, ಹೆತ್ತೂರು ಮತ್ತು ಹೊಂಗಡಹಳ್ಳ ಗ್ರಾಮದ ಶಾಲೆಗಳ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಅನುದಾನವನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಎಸ್.ಡಿ.ಎಂ.ಸಿಗೆ ವರ್ಗಾಯಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು. ಉಳಿಕೆ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಲು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಗೆ ಸೂಚಿಸಲಾಯಿತು.<br>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರು ಮಾತನಾಡುತ್ತಾ, ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಇರುವ ಶಾಲೆಗಳಿಗೆ ಹೆಚ್ಚುವರಿ ಕೊಠಡಿಗಳನ್ನು ಮಂಜೂರು ಮಾಡುವುದು ಸೂಕ್ತವೆಂದು ಅಭಿಪ್ರಾಯಪಟ್ಟರು. | ಸಮಗ್ರ ಚರ್ಚೆಯ ನಂತರ ದಿ: 22-11-2012 ರಂದು ನಡೆದ ಹಣಕಾಸು, ಲೆಕ್ಕ ಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಸಭೆಯು ಸರ್ವಾನುಮತದಿಂದ ಅನುಮೋದಿಸಿತು. |

| | | | |
|---|---|---|---|
| | | ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಓವರ್ ಹೆಡ್ ಟ್ಯಾಂಕ್ ಕಾಮಗಾರಿಗಳನ್ನು ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ಇಲಾಖೆಯ ಮೂಲಕ ಅನುಷ್ಠಾನ ಮಾಡಲು ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಓವರ್ ಹೆಡ್ ಟ್ಯಾಂಕ್ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ ಟೆಂಡರ್ ಕರೆಯಲಾಗಿದೆ. ಟೆಂಡರ್ ಅಂತಿಮವಾಗಿದೆಯೇ? ಅಥವಾ ಇಲ್ಲವೇ ಎಂಬುದರ ಬಗ್ಗೆ ವಿವರಗಳನ್ನು ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಂದ ಪಡೆದು ನಂತರ ಪರಿಶೀಲಿಸಲಾಗುವುದು ಎಂದು ವಿವರ ನೀಡಿದರು.<br>ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಉತ್ತರಿಸುತ್ತಾ, ದಿನಾಂಕ: 05-12-2012ರಂದು ಓವರ್ ಹೆಡ್ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಟೆಂಡರ್ ಹಾಕಲು ಅಂತಿಮ ದಿನಾಂಕವಾಗಿದ್ದು, ಆ ನಂತರ ಯಾರು ಟೆಂಡರ್‌ನಲ್ಲಿ ಭಾಗವಹಿಸಿದ್ದಾರೆ ಎಂಬ ಬಗ್ಗೆ ವಿವರಗಳನ್ನು ನೀಡಲು ಕ್ರಮ ವಹಿಸುವುದಾಗಿ ತಿಳಿಸಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಯಾವುದೇ ಅನುದಾನವನ್ನು ವ್ಯಪಗತ ಮಾಡದಂತೆ ವಿನಿಯೋಗಿಸಬೇಕೆಂದು ಮತ್ತು ಪ್ರಸಕ್ತ ಸಾಲಿನಲ್ಲಿ ಓವರ್ ಹೆಡ್ ಟ್ಯಾಂಕ್ ಕಾಮಗಾರಿಗಳಿಗೆ ಸಾಕಷ್ಟು ಅನುದಾನವನ್ನು ನೀಡಲಾಗಿದೆ. ಆದ್ದರಿಂದ, ರಸ್ತೆ/ಚರಂಡಿ/ಕಟ್ಟಡ ಕಾಮಗಾರಿಗಳನ್ನು ಅನುಷ್ಠಾನ ಮಾಡುವ ಗುತ್ತಿಗೆದಾರರ ಮನವೊಲಿಸಿ ಓವರ್ ಹೆಡ್ ಟ್ಯಾಂಕ್ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಕ್ರಮ ವಹಿಸಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ಸ್ವಾಮಿಗೌಡರವರು ಮಾತನಾಡುತ್ತ, ಬೂವನಹಳ್ಳಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವಿದ್ಯಾನಗರ, ಇಂದಿರಾ ನಗರ ಬಡಾವಣೆಗಳಲ್ಲಿ 25 ಕೊಳವೆ ಬಾವಿಗಳನ್ನು ಕೊರೆಸಿದರೂ ಸಹ ಒಂದೆರಡು ಬಾವಿಗಳನ್ನು ಹೊರತುಪಡಿಸಿ ಉಳಿದ ಕೊಳವೆಬಾವಿ ವಿಫಲವಾಗಿದ್ದು, ಕುಡಿಯುವ ನೀರನ್ನು ಒದಗಿಸಲು ಬಹಳ ಸಮಸ್ಯೆಯಾಗಿದೆ. ಅಲ್ಲದೆ, ವಿದ್ಯಾನಗರದಲ್ಲಿ ನಗರಸಭೆಗೆ ಸೇರಿದ ಓವರ್‌ಹೆಡ್ ಟ್ಯಾಂಕ್ ಇರುತ್ತದೆ. ಆದ್ದರಿಂದ, ನಗರಸಭೆಯವರೊಂದಿಗೆ ಚರ್ಚಿಸಿ ಹೇಮಾವತಿ ಜಲಾಶಯದಿಂದ ವಿದ್ಯಾನಗರ ಬಡಾವಣೆಗೆ ನೀರನ್ನು ಸರಬರಾಜು ಮಾಡಿಸಲು ಕ್ರಮ ವಹಿಸಬೇಕೆಂದು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಈಶ್ವರಹಳ್ಳಿ ಲಕ್ಷ್ಮಣ್‌ರವರು ಮಾತನಾಡುತ್ತಾ, ಜಾವಗಲ್ ಸುತ್ತಮುತ್ತಲಿನ ಗ್ರಾಮಗಳಿಗೆ ಯಗಚಿ ಜಲಾಶಯದಿಂದ ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನ ಮಾಡಲಾಗಿದ್ದು, ಆದರೆ, ಸಾರ್ವಜನಿಕರಿಗೆ ಸಮರ್ಪಕವಾಗಿ ನೀರನ್ನು ಒದಗಿಸುತ್ತಿಲ್ಲ. ಈ ಬಗ್ಗೆ ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣರವರು ವಿವರ ನೀಡುವಂತೆ ತಿಳಿಸಿದರು. | |

| | | | |
|---|---|---|---|
| | | ವಹಿಸಲಾಗಿದೆ ಎಂಬ ಬಗ್ಗೆ ವಿವರ ನೀಡಬೇಕೆಂದು ಕೋರಿದರು. ಅಲ್ಲದೆ ಅರಕಲಗೂಡು ತಾಲ್ಲೂಕಿನಲ್ಲಿ ಅವಶ್ಯಕತೆಯಿರುವ ಕಡೆಗಳಲ್ಲಿ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡುತ್ತಿಲ್ಲ. ಕೆರೆಕಟ್ಟೆಗಳಲ್ಲಿಯೂ ಸಹ ನೀರು ಇರುವುದಿಲ್ಲ. ಆದ್ದರಿಂದ, ತೀವ್ರ ಸಮಸ್ಯೆಯಿರುವ ಕಡೆಗಳಲ್ಲಿ ಕೊಳವೆ ಬಾವಿಗಳನ್ನು ಕೊರೆದು ಪರಿಹಾರವನ್ನು ಒದಗಿಸಬೇಕಾಗಿದೆ. ಜಾನುವಾರುಗಳಿಗೆ ಕುಡಿಯುವ ನೀರನ್ನು ಒದಗಿಸುವ ನಿಟ್ಟಿನಲ್ಲಿ ನೀರು ಬರುವಂತಹ ಕೆರೆಗಳಲ್ಲಿ ಹೊಂಡಗಳನ್ನು ತೆಗೆಯಲು ಕ್ರಮ ವಹಿಸಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ಸರ್ಕಾರದಿಂದ ರೂ.59.00ಲಕ್ಷಗಳು ಕುಡಿಯುವ ನೀರಿನ ಯೋಜನೆಗಳಿಗೆ ಬಿಡುಗಡೆ ಮಾಡಲಾಗಿದೆ ಮತ್ತು ಜಿಲ್ಲಾ ಪಂಚಾಯಿತಿ ಸದಸ್ಯರು ನೀಡಿರುವ ಕಾಮಗಾರಿಗಳನ್ನು ಐ.ಎಂ.ಐ.ಎಸ್ ನಲ್ಲಿ ಅಳವಡಿಸಲಾಗಿದೆ. ಜಿಲ್ಲಾ ಪಂಚಾಯಿತಿ ಸದಸ್ಯರನ್ನು ಬರಪರಿಹಾರ ಸಮಿತಿಗೆ ಸದಸ್ಯರನ್ನಾಗಿ ಮಾಡುವ ಯಾವುದೇ ಸರ್ಕಾರಿ ಆದೇಶವಿರುವುದಿಲ್ಲ. ಆದರೆ, ತಾಲ್ಲೂಕುಮಟ್ಟದಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ನಡೆಯುವ ಜಾಗೃತಿ ಸಮಿತಿ ಸಭೆಯಲ್ಲಿ ಯಾವುದೇ ವಿಷಯಗಳ ಬಗ್ಗೆ ಚರ್ಚೆ ಮಾಡಬಹುದಾಗಿದೆ. ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ಜಿಲ್ಲಾ ಪಂಚಾಯಿತಿಗೆ ಬರಪರಿಹಾರ ಯೋಜನೆಯಡಿಯಲ್ಲಿ ರೂ.1.00ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಜಿಲ್ಲಾಧಿಕಾರಿಯವರಿಗೆ ಪತ್ರ ಬರೆಯಲಾಗಿದೆ. ತುರ್ತು ಕುಡಿಯುವ ನೀರಿನ ಕಾಮಗಾರಿಗಳಿಗೆ ಸಲ್ಲಿಸಿರುವ ರೂ.31.00ಕೋಟಿಗಳ ಪ್ರಸ್ತಾವನೆಯಲ್ಲಿ ಸರ್ಕಾರದಿಂದ ರೂ.28.00ಕೋಟಿಗಳಿಗೆ ಅನುಮೋದನೆ ದೊರೆಯುವ ನಿರೀಕ್ಷೆ ಇದೆ. ಈ ಅನುದಾನದಲ್ಲಿ ಮುಂದಿನ ಮೂರು ತಿಂಗಳವರೆಗೆ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಬಹುದೆಂದು ತಿಳಿಸಿದರು. ಫೆಬ್ರವರಿ 2013ರ ನಂತರ ಕೊಳವೆ ಬಾವಿಗಳು ಬತ್ತಿ ಹೋದಲ್ಲಿ ಜಿಲ್ಲಾ ಪಂಚಾಯಿತಿ ಸದಸ್ಯರೊಂದಿಗೆ ಚರ್ಚಿಸಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಅಂಗನವಾಡಿ ಕಟ್ಟಡ ಕಾಮಗಾರಿಗಳು ಪ್ರಾರಂಭವಾಗಿರುವುದಿಲ್ಲ. ಈ ಬಗ್ಗೆ ವಿವರ ನೀಡಬೇಕೆಂದು ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತ, 37 ಅಂಗನವಾಡಿ ಕಟ್ಟಡ ಕಾಮಗಾರಿಗಳಿಗೆ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿದ್ದು, ಈ ಅನುದಾನ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ಇಲಾಖೆಯಲ್ಲಿದ್ದು, ಪಂಚಾಯತ್ ರಾಜ್ ಇಂಜನಿಯರಿಂಗ್ ವಿಭಾಗಗಳಿಗೆ ಅನುದಾನವನ್ನು ಜಿಲ್ಲಾ ಪಂಚಾಯಿತಿಯಿಂದ ಬಿಡುಗಡೆ ಮಾಡಲಾಗುವುದು. ನಬಾರ್ಡ್ ಘಟಕ ವೆಚ್ಚ ರೂ.3.62ಲಕ್ಷಗಳಿದ್ದು, ರೂ.38000/-ಗಳನ್ನು 13ನೇ ಹಣಕಾಸು ಇತರೆ ಯೋಜನೆಯಡಿ ಜಿಲ್ಲಾ ಪಂಚಾಯತ್ ಸದಸ್ಯರು ನೀಡಿದಲ್ಲಿ ಮಾರ್ಚ್ ಅಂತ್ಯಕ್ಕೆ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು. | ನಂತರ ದಿನಾಂಕ: 24-08-2012 ರಂದು ನಡೆದ ಸಾಮಾನ್ಯ ಸಭೆಯ ನಡವಳಿ ಗಳನ್ನು ಸಭೆಯು ಸರ್ವಾನು ಮತದಿಂದ ಅಂಗೀಕರಿಸಿತು. |

# ದಿನಾಂಕ: 30–11–2012ರಂದು ಅಪರಾಹ್ನ: 12–30ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾನ್ಯ ಸಭೆಯ ನಡವಳಿಗಳು

## ಅಧ್ಯಕ್ಷತೆ: ಶ್ರೀಮತಿ ಡಿ.ಜಿ. ಅಂಬಿಕ ರಾಮಣ್ಣ

## ಅಧ್ಯಕ್ಷರು

## ಜಿಲ್ಲಾ ಪಂಚಾಯಿತಿ, ಹಾಸನ.

**ಹಾಜರಿ: 39** **ಗೈರು ಹಾಜರಿ:19**

| ಕ್ರ.ಸಂ. | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಸಭೆಗೆ ಹಾಜರಿದ್ದ, ಮಾನ್ಯ ಅಧ್ಯಕ್ಷರು, ಮಾನ್ಯ ಉಪಾಧ್ಯಕ್ಷರು, ಮಾನ್ಯ ಸದಸ್ಯರು, ತಾಲ್ಲೂಕು ಪಂಚಾಯಿತಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಮಾದ್ಯಮದವರನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು. | |
| 3 | ದಿನಾಂಕ:24–08–2012 ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ. | ದಿನಾಂಕ:24–08–2012 ರಂದು ನಡೆದ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವಂತೆ ಮಾನ್ಯ ಅಧ್ಯಕ್ಷರಾದ ಶ್ರೀಮತಿ ಡಿ.ಜಿ.ಅಂಬಿಕ ರಾಮಣ್ಣರವರು ಸಭೆಯನ್ನು ಕೋರಿದರು.<br>ಮಾನ್ಯ ಸದಸ್ಯರಾದ ಶ್ರೀ ಬಿ.ಡಿ.ಚಂದ್ರೇಗೌಡರವರು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ಮಾನ್ಯ ಶ್ರೀ ಪಟೇಲ್ ಶಿವರಾಂರವರು ಪ್ರಸ್ತಾಪಿಸಿದಂತೆ, ವಿ–ನಿಯಮಗಳ ರಚನೆ ಕುರಿತು ಏನು ಕ್ರಮ ವಹಿಸಲಾಗಿದೆ ಎಂಬ ಬಗ್ಗೆ ವಿವರಗಳನ್ನು ನೀಡುವಂತೆ ಕೋರಿದರು.<br>ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಮಾತನಾಡುತ್ತಾ, ವಿ–ನಿಯಮಗಳ ರಚನೆ ಕುರಿತಂತೆ ಬೆಳಗಾಂ ಮತ್ತು ರಾಮನಗರ ಜಿಲ್ಲಾ ಪಂಚಾಯಿತಿಗಳಲ್ಲಿ ರಚನೆ ಮಾಡಿರುವ ವಿ–ನಿಯಮಗಳ ಪ್ರತಿಗಳನ್ನು ತರಿಸಿಕೊಳ್ಳಲಾಗಿದೆ. ಅವುಗಳನ್ನು ಪರಿಶೀಲಿಸಲಾಗತ್ತಿದೆ ಮತ್ತು ವಿ–ನಿಯಮಗಳನ್ನು ಚರ್ಚಿಸಲು ಒಂದು ವಿಶೇಷ ಸಭೆಯನ್ನು ಕರೆದು ಮಂಡಿಸಬೇಕಾಗಿರುತ್ತದೆ. ಹಾಸನ ಜಿಲ್ಲಾ ಪಂಚಾಯಿತಿಯ ವಿ–ನಿಯಮಗಳ ಕರಡು ಪ್ರತಿಯನ್ನು ಇನ್ನೊಂದು ವಾರದಲ್ಲಿ ಮಾನ್ಯ ಸದಸ್ಯರುಗಳಿಗೆ ಪ್ರತಿಯನ್ನು ನೀಡಿ ಅವರಿಂದ ಸಲಹೆ/ಸೂಚನೆಗಳನ್ನು ಪಡೆದು ಅಂತಿಮಗೊಳಿಸಲು ಕ್ರಮ ವಹಿಸಲಾಗುವುದು ಎಂದು ಮಾಹಿತಿಯನ್ನು ನೀಡಿದರು.<br>ಮಾನ್ಯ ಸದಸ್ಯರಾದ ಶ್ರೀ ವಿ.ಎ.ನಂಜುಂಡಸ್ವಾಮಿರವರು ಮಾತನಾಡುತ್ತಾ, ಬರಪರಿಹಾರ ಯೋಜನೆಯಡಿಯಲ್ಲಿ ಜಿಲ್ಲಾ ಪಂಚಾಯಿತಿಗೆ ಜಿಲ್ಲಾಧಿಕಾರಿಯವರ ಅನುದಾನದಲ್ಲಿ ರೂ.1.00ಕೋಟಿಗಳ ಅನುದಾನವನ್ನು ನೀಡುವ ಬಗ್ಗೆ ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿದೆ. ಆ ಬಗ್ಗೆ ಏನು ಕ್ರಮ | ಸಭೆಯಲ್ಲಿ ಚರ್ಚಿಸಿದಂತೆ, ಹಾಸನ ನಗರದ ವಿದ್ಯಾನಗರ, ಇಂದಿರಾನಗರ ಬಡಾವಣೆಗಳಿಗೆ ಕುಡಿಯುವ ನೀರಿನ ಸಮಸ್ಯೆ ಬಹಳವಾಗಿದ್ದು, ಕೊಳವೆ ಬಾವಿಗಳೂ ಸಹ ವಿಫಲವಾಗು ತ್ತಿರುವುದರಿಂದ, ಹೇಮಾವತಿ ಜಲಾಶಯದಿಂದ ಮೇಲ್ಕಂಡ ಬಡಾವಣೆಗಳಿಗೆ ಕುಡಿಯುವ ನೀರಿನ ಸರಬರಾಜನ್ನು ಮಾಡು ವಂತೆ ಆಯುಕ್ತರು, ನಗರಸಭೆ, ಹಾಸನ ಇವರಿಗೆ ಪತ್ರವನ್ನು ಬರೆಯಲು ಸಭೆಯಲ್ಲಿ ಸರ್ವಾನು ಮತದಿಂದ ನಿರ್ಣಯಿಸ ಲಾಯಿತು.<br><br>ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿದ |

4. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಮಾಹಿತಿಗಾಗಿ ಸಲ್ಲಿಸಿದೆ
5. ಹಾಸನ ಜಿಲ್ಲಾ ಪಂಚಾಯತ್, ಮಾನ್ಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಆಪ್ತಶಾಖೆಗೆ ಮಾಹಿತಿಗಾಗಿ ಸಲ್ಲಿಸಿದೆ.
6. ಹಾಸನ ಜಿಲ್ಲೆಯ ಎಲ್ಲಾ ಮಾನ್ಯ ಜಿಲ್ಲಾ ಪಂಚಾಯಿತಿ ಸದಸ್ಯರುಗಳಿಗೆ ಸಭೆಗೆ ಹಾಜರಾಗಲು ಕೋರಿದೆ.
7. ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಅಧ್ಯಕ್ಷರುಗಳಿಗೆ
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಆಪ್ತಶಾಖೆ, ಜಿಲ್ಲಾ ಪಂಚಾಯಿತಿ, ಹಾಸನ.
9. ಉಪಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯಿತಿ, ಹಾಸನ.
10. ಉಪಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯಿತಿ, ಹಾಸನ.
11. ಮುಖ್ಯ ಲೆಕ್ಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
12. ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ.
13. ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ
14. ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ
16. ಉಪ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯಗಳ ಇಲಾಖೆ, ಹಾಸನ
17. ಚೆಸ್ಕಾಂ, ಹಾಸನ (ಕೆ..ಇ.ಬಿ.), ಹಾಸನ.
18. ಕಛೇರಿ ಪ್ರತಿ.

# ಜಿಲ್ಲಾ ಪಂಚಾಯಿತಿ, ಹಾಸನ.

ಸಂಖ್ಯೆ: ಜಿಪಂಹಾ/ಪ.ಶಾ/39 /2012–13

ದಿನಾಂಕ: 22–11–2012

## ಸಭಾಹ್ವಾನ ಪತ್ರ

**ದಿನಾಂಕ: 30–11–2012ರಂದು ಶುಕ್ರವಾರ ಅಪರಾಹ್ನ: 12–30** ಗಂಟೆಗೆ ಶ್ರೀಮತಿ ಡಿ.ಜೆ.ಅಂಬಿಕರಾಮಣ್ಣ, ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾಸನ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್ ಸಾಮಾನ್ಯ ಸಭೆಯನ್ನು ಹೊಯ್ಸಳ ಸಭಾಂಗಣದಲ್ಲಿ ಕರೆಯಲಾಗಿದೆ. ಮಾನ್ಯ ಸದಸ್ಯರುಗಳು ಸಭೆಗೆ ಸಕಾಲದಲ್ಲಿ ಹಾಜರಾಗಲು ಕೋರಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯಿತಿ, ಹಾಸನ.

**ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು:**

1. ದಿನಾಂಕ: 24–08–2012ರಂದು ನಡೆದ ಸಾಮಾನ್ಯ ಸಭೆಯ ನಡವಳಿಗಳನ್ನು ಅಂಗೀಕರಿಸುವ ಬಗ್ಗೆ
2. ದಿನಾಂಕ: 22–11–2012ರಂದು ನಡೆದ ಹಣಕಾಸು, ಲೆಕ್ಕಪರಿಶೋಧನೆ ಮತ್ತು ಯೋಜನಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ
3. ದಿನಾಂಕ: 21–11–2012ರಂದು ನಡೆದ ಸಾಮಾನ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ
4. ದಿನಾಂಕ: 20–11–2012ರಂದು ನಡೆದ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ
5. ದಿನಾಂಕ: 21–11–2012ರಂದು ನಡೆದ ಕೃಷಿ ಮತ್ತು ಕೈಗಾರಿಕಾ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ
6. ದಿನಾಂಕ: 20–11–2012ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳನ್ನು ಅನುಮೋದಿಸುವ ಬಗ್ಗೆ

**ಅಧ್ಯಕ್ಷರ ಅಪ್ಪಣೆ ಮೇರೆಗೆ ವಿಷಯಗಳು**

ಪ್ರತಿಯನ್ನು:

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಲೋಕಸಭಾ ಸದಸ್ಯರು, ಹಾಸನ ಜಿಲ್ಲೆ, ಹಾಸನ ಇವರಿಗೆ ದಯಾಪರ ಅವಗಾಹನೆಗೆ ಸಲ್ಲಿಸಿದೆ.